ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 737

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 10.03.2020

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ;</td><td>ಪ್ರಸ್ತುತ ಬೀದರ್ ಜಿಲ್ಲೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಪಡಿತರ ಚೀಟಿದಾರರಿಗೆ ಅಕ್ಕಿಯನ್ನು ವಿತರಿಸಲಾಗುತ್ತಿದೆ.</td></tr>
<tr><td>ಆ</td><td>ಬೀದರ್ ಜಿಲ್ಲೆಯಲ್ಲಿ ಸರಿಯಾದ ಸಮಯಕ್ಕೆ ಆಹಾರ ಧಾನ್ಯಗಳನ್ನು ವಿತರಣೆ ಮಾಡದೆ, ಜನ ಸಾಮಾನ್ಯರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;</td><td>ರಾಜ್ಯದಲ್ಲಿನ ಎಲ್ಲಾ ಪಡಿತರ ಚೀಟಿದಾರರಿಗೆ ನಿಗಧಿತ ಸಮಯದಲ್ಲಿ ಆಹಾರಧಾನ್ಯಗಳನ್ನು ವಿತರಣೆ ಮಾಡಲು ಕ್ರಮವಹಿಸಲಾಗಿದೆ. ಬೀದರ್ ಜಿಲ್ಲೆಯ ಎಲ್ಲಾ ಪಡಿತರ ಚೀಟಿಗಳು ಮತ್ತು ಫಲಾನುಭವಿಗಳನ್ನು ಅವರ ಆಧಾರ್ ನೊಂದಿಗೆ ಜೋಡಣೆ ಮಾಡಿದ್ದು, ಪ್ರತಿ ಮಾಹೆ ಪಡಿತರ ಪದಾರ್ಥಗಳನ್ನು ನಿರ್ದಿಷ್ಟ ಫಲಾನುಭವಿಗಳಿಗೆ ತಲುಪಿಸಲು ಬಯೋಮೆಟ್ರಿಕ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಪಿ.ಓ.ಎಸ್ ವ್ಯವಸ್ಥೆ ಜಾರಿಗೊಳಿಸಿದೆ.</td></tr>
<tr><td>ಇ</td><td>ಬೀದರ್ ಜಿಲ್ಲೆಯಲ್ಲಿ ನ್ಯಾಯ ಬೆಲೆ ಅಂಗಡಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾರ್ಯನಿರ್ವಹಿಸದೇ ಇರುವ ನ್ಯಾಯ ಬೆಲೆ ಅಂಗಡಿಗಳ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ? (ತಾಲ್ಲೂಕುವಾರು ವಿವರ ಒದಗಿಸುವುದು)</td><td>ಬೀದರ್ ಜಿಲ್ಲೆಯಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸದ ನ್ಯಾಯ ಬೆಲೆ ಅಂಗಡಿಗಳ ವಿರುದ್ಧ ಕ್ರಮಕೈಗೊಳ್ಳಲಾಗಿದ್ದು, ವಿವರ ಈ ಕೆಳಕಂಡಂತೆ ಇರುತ್ತದೆ.
<table>
<tr><th>ಕ್ರ.ಸಂ.</th><th>ತಾಲ್ಲೂಕು</th><th>ಅಮಾನತ್ತುಗೊಳಿಸಿದ ನ್ಯಾಯಬೆಲೆ ಅಂಗಡಿ ಸಂಖ್ಯೆ ಮತ್ತು ದಿನಾಂಕ: (ಕಳೆದ ಒಂದು ವರ್ಷದಲ್ಲಿ)</th></tr>
<tr><td>1</td><td>ಔರಾದ್ (ಬಿ)</td><td>1. ನ್ಯಾಯಬೆಲೆ ಅಂಗಡಿ ಸಂಖ್ಯೆ:72, ಬೆಂಬ್ರಾ ಗ್ರಾಮ, ದಿನಾಂಕ: 06-03-2019
2. ನ್ಯಾಯಬೆಲೆ ಅಂಗಡಿ ಸಂಖ್ಯೆ: 48, ಮಣೂರ (ಕೆ) ಗ್ರಾಮ, ದಿನಾಂಕ: 24-09-2019
3. ನ್ಯಾಯಬೆಲೆ ಅಂಗಡಿ ಸಂಖ್ಯೆ: 8 ವಡಗಾಂವ (ಡಿ) ಗ್ರಾಮ, ದಿನಾಂಕ: 24-06-2019</td></tr>
</table>
</td></tr>
</table>

		2	ಬಸವಕಲ್ಯಾಣ	1. ನ್ಯಾಯಬೆಲೆ ಅಂಗಡಿ ಸಂ.81 ಮಿರಕಲ್ ಗ್ರಾಮ, ದಿನಾಂಕ: 24-09-2019
		3	ಹುಮನಾಬಾದ್	1. ನ್ಯಾಯಬೆಲೆ ಅಂಗಡಿ ಸಂ:91 ಹಂದಿಕೇರಾ ಗ್ರಾಮ ದಿನಾಂಕ: 18-09-2019

ಆನಾಸ 67 ಡಿಆರ್ ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.